**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 631 ಗ್ರಾಪಂಅ 2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 10–08–2015

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿಗಳು ದಿನಾಂಕ:20–08–2015 ರಂದು ವಿಶೇಷ ಗ್ರಾಮ ಸಭೆಗಳನ್ನು ಕಡ್ಡಾಯವಾಗಿ ನಡೆಸುವ ಬಗ್ಗೆ.

**ಉಲ್ಲೇಖ:**
1. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 3–ಎ.
2. ಕರ್ನಾಟಕ ಪಂಚಾಯತ್ ರಾಜ್ (ವಾರ್ಡ್‌ಸಭೆ ಮತ್ತು ಗ್ರಾಮಸಭೆ) ನಿಯಮಗಳು 2004.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 250 ಗ್ರಾಪಂಅ 2011, ದಿನಾಂಕ: 22–09–2011.
4. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 8 ಗ್ರಾಪಂಅ 2012, ದಿನಾಂಕ: 08–03–2012.

====

ವಿಕೇಂದ್ರೀಕೃತ ಆಡಳಿತದ ಯಾವುದೇ ವ್ಯವಸ್ಥೆಯ ತಳಹದಿಯು ಜನರ ಭಾಗವಹಿಸುವಿಕೆಯೇ ಆಗಿದ್ದು, ಜನರಿಗೆ ಅಧಿಕಾರ ವಹಿಸಿಕೊಟ್ಟಾಗ ಮಾತ್ರ ಇದು ಅರ್ಥಪೂರ್ಣವಾಗುತ್ತದೆ. ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಭೆಯು ಜನರಿಗೆ ಅಧಿಕಾರ ವಹಿಸಿಕೊಡುವುದನ್ನು ಖಚಿತಪಡಿಸುವುದಕ್ಕೆ ಒಂದು ಅತ್ಯಾವಶ್ಯಕ ಸಾಂಸ್ಥಿಕ ವ್ಯವಸ್ಥೆಯಾಗಿರುತ್ತದೆ. ಹೀಗೆ, ವಿಕೇಂದ್ರಿಕರಣದ ಮಾದರಿಗಳು ಗ್ರಾಮ ಸಭೆಯೆಂಬ ಸ್ಪಂದನಶೀಲ ವ್ಯವಸ್ಥೆಯ ತಳಪಾಯವನ್ನು ಆಧರಿಸುತ್ತವೆ. **ಗ್ರಾಮ ಸಭೆಯು ಹಳ್ಳಿಯ ವಿಧಾನಸಭೆಯಾಗಿರುತ್ತದೆ.** ಈ ಹಿನ್ನೆಲೆಯಲ್ಲಿ ಹೊಸದಾಗಿ ಆಯ್ಕೆಯಾಗಿರುವ ಗ್ರಾಮ ಪಂಚಾಯಿತಿ ಸದಸ್ಯರುಗಳಿಗೆ ಗ್ರಾಮ ಸಭೆಯ ಬಗ್ಗೆ ಅರಿವು ಮೂಡಿಸಬೇಕಾಗಿದೆ.

**ಕರ್ನಾಟಕ ಪಂಚಾಯತಿ ರಾಜ್ ಅಧಿನಿಯಮ, 1993 ರ ಪ್ರಕರಣ 3–ಎ** ರಲ್ಲಿ ನಿಯತ ಮತ್ತು ಮಧ್ಯಂತರ ವಾರ್ಡ್ ಸಭೆ ಮತ್ತು ಗ್ರಾಮ ಸಭೆಯನ್ನು ಸಮಾವೇಶಗೊಳಿಸುವುದನ್ನು ಗ್ರಾಮ ಪಂಚಾಯತಿಗಳಿಗೆ ಕಡ್ಡಾಯಗೊಳಿಸಲಾಗಿದೆ. ಗ್ರಾಮಸಭೆಗಳನ್ನು ನಡೆಸುವ ಸಂಬಂಧ ಈ ಹಿಂದೆ ಹಲವಾರು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಪ್ರತಿಯೊಂದು ಗ್ರಾಮ ಪಂಚಾಯತಿಯಲ್ಲಿ ನಡೆಯುವ ಗ್ರಾಮ ಸಭೆಗಳನ್ನು ದಾಖಲೀಕರಿಸುವ ದೃಷ್ಟಿಯಿಂದ ಹಾಗೂ ಸಾರ್ವಜನಿಕರಿಗೆ ಅವಶ್ಯಕವಿದ್ದಾಗ ಮಾಹಿತಿ ನೀಡುವ ದೃಷ್ಟಿಯಿಂದ ಎಲ್ಲಾ ಗ್ರಾಮ ಸಭೆಗಳ ಕಾರ್ಯಕಲಾಪಗಳನ್ನು ಕಡ್ಡಾಯವಾಗಿ ವಿಡಿಯೋ ಚಿತ್ರೀಕರಣ ಮಾಡತಕ್ಕದ್ದು. ವಿಡಿಯೋ ಚಿತ್ರೀಕರಣದ ಬಗ್ಗೆ ಉಲ್ಲೇಖ (3) ರ ಸುತ್ತೋಲೆಯಲ್ಲಿ ವಿವರಿಸಲಾಗಿದೆ. ಅಲ್ಲದೇ ಪಂಚತಂತ್ರ/ಆರ್.ಎಫ್.ಡಿ.ಯಲ್ಲಿ ಛಾಯಾಚಿತ್ರ ಮತ್ತು ನಡವಳಿಗಳನ್ನು ಅಪ್ಲೋಡ್ ಮಾಡಲು ತಿಳಿಸಿದೆ.

ಉಲ್ಲೇಖ (4) ಸುತ್ತೋಲೆಯಲ್ಲಿ ಗ್ರಾಮ ಸಭೆಯನ್ನು ಪರಿಣಾಮಕಾರಿಯಾಗಿ ನಡೆಸುವ ಬಗ್ಗೆ ಹಾಗೂ ಆಡಳಿತ ವ್ಯವಸ್ಥೆಯಲ್ಲಿ ಜನರ ಸಹಭಾಗಿತ್ವವನ್ನು ಹೆಚ್ಚಿಸುವ ಬಗ್ಗೆ ವಿವರವಾಗಿ ತಿಳಿಸಲಾಗಿದೆ.

ಪ್ರಸ್ತುತ ಗ್ರಾಮ ಪಂಚಾಯತಿಗಳಿಗೆ 2015 ರ ಮೇ ಮತ್ತು ಜೂನ್ ತಿಂಗಳಿನಲ್ಲಿ ಚುನಾವಣೆ ನಡೆದು ಹೊಸದಾಗಿ ಆಡಳಿತ ಮಂಡಳಿಯು ಅಸ್ತಿತ್ವಕ್ಕೆ ಬಂದಿದ್ದು, ನೂತನವಾಗಿ ಚುನಾಯಿತರಾದ ಗ್ರಾಮ ಪಂಚಾಯತಿ ಸದಸ್ಯರುಗಳಿಗೆ ಗ್ರಾಮ ಸಭೆಯ ಬಗ್ಗೆ ತಿಳುವಳಿಕೆ ನೀಡುವ ಸಲುವಾಗಿ ದಿನಾಂಕ:20-08-2015 ರಂದು ಗ್ರಾಮ ಸಭೆ ನಡೆಸಲು ಈ ಮೂಲಕ ತಿಳಿಸಲಾಗಿದೆ. ಅಗತ್ಯಕ್ಕೆ ತಕ್ಕಂತೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿಕೊಂಡು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಏಕ ಕಾಲದಲ್ಲಿ ವಿಶೇಷ ಗ್ರಾಮ ಸಭೆಗಳನ್ನು ನಡೆಸುವ ಬಗ್ಗೆ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಈ ಮೂಲಕ ಕೋರಿದೆ. ಅಗತ್ಯವಿದ್ದಲ್ಲಿ ಬೆಳಿಗ್ಗೆ ಮತ್ತು ಮಧ್ಯಾಹ್ನಗಳಂದು ಬೇರೆ ಬೇರೆಯಾಗಿ ಗ್ರಾಮ ಸಭೆಗಳನ್ನು ನಡೆಸಬಹುದು ಎಂದು ತಿಳಿಸಿದೆ.

ಸದರಿ ಸಭೆಗಳಿಗೆ ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಸಚಿವರುಗಳು, ಮಾನ್ಯ ಶಾಸಕರುಗಳು, ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಸದಸ್ಯರುಗಳು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮೊದಲಾದವರು ಭಾಗವಹಿಸುವರು ಎಂದು ತಮಗೆ ತಿಳಿಸಲಾಗಿದೆ. ಯಾವ ಯಾವ ಗ್ರಾಮ ಸಭೆಯಲ್ಲಿ ಭಾಗವಹಿಸುವುದು ಎಂಬುದು ತಿಳಿದು ಬಂದಿರುವುದಿಲ್ಲ. ಆದ್ದರಿಂದ ಸಂಬಂಧಪಟ್ಟ ಎಲ್ಲಾ ಗ್ರಾಮ ಪಂಚಾಯಿತಿಗಳು ಗ್ರಾಮ ಸಭೆಗಳನ್ನು ನಡೆಸಲು ಅಗತ್ಯ ಕ್ರಮ ವಹಿಸುವಂತೆ ತಮಗೆ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

(ಕೆ. ಯಾಲಕ್ಕಿಗೌಡ) 8/15

ನಿರ್ದೇಶಕರು (ಪಂ.ರಾಜ್) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

1) ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು,
2) ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.